**ಕರ್ನಾಟಕ ವಿಧಾನ ಪರಿಷತ್ತು**

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 588

ಸದಸ್ಯರ ಹೆಸರು : ಶ್ರೀ ಆರ್. ಧರ್ಮಸೇನ

ಉತ್ತರಿಸುವ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ಉತ್ತರಿಸುವ ದಿನಾಂಕ : 11-12-2020

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಮೆಟ್ರೋ ರೈಲು ಪ್ರಾರಂಭವಾದ ಮೇಲೆ ಹೆಚ್ಚು ಜನ ಅದರಲ್ಲೇ ಪ್ರಯಾಣ ಮಾಡುತ್ತಿದ್ದು, ಇದರಿಂದ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ಬಸ್ಸುಗಳಲ್ಲಿ ಪ್ರಯಾಣಿಕರ ಸಂಖ್ಯೆ ಕಡಿಮೆಯಾಗಿಲ್ಲವೇ; ಇದರಿಂದ ಸಂಸ್ಥೆಗೆ ಆದ ನಷ್ಟ ಎಷ್ಟು; (ನಷ್ಟದ ಬಗೆಗಿನ ಮಾಹಿತಿ ಒದಗಿಸುವುದು) | ಪ್ರಯಾಣಿಕರ ಸಂಖ್ಯೆ ಕಡಿಮೆ ಆಗಿರುತ್ತದೆ.<br>ಮೆಟ್ರೋ ರೈಲಿನಲ್ಲಿ ಪ್ರತಿದಿನ ಅಂದಾಜು 5 ಲಕ್ಷ ಪ್ರಯಾಣಿಕರು ಸಂಚರಿಸುತ್ತಿದ್ದಾರೆ. ಸದರಿ ಪ್ರಯಾಣಿಕರಲ್ಲಿ ಶೇ.80 ರಷ್ಟು ಪ್ರಯಾಣಿಕರು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ಸಾರಿಗೆಗಳಿಂದ ಹಾಗೂ ಉಳಿದ ಶೇ.20 ರಷ್ಟು ಪ್ರಯಾಣಿಕರು ವೈಯಕ್ತಿಕ/ಇತರೇ ಸಾರಿಗೆ ಬಳಸುವ (ಕಾರು, ದ್ವಿಚಕ್ರ, ಆಟೋ, ಟ್ಯಾಕ್ಸಿ) ಪ್ರಯಾಣಿಕರಾಗಿರುತ್ತಾರೆ ಎಂದು ಅಂದಾಜಿಸಲಾಗಿದೆ. ಇದರಿಂದ ಸಂಸ್ಥೆಯ ಸಾರಿಗೆಗಳಲ್ಲಿ ಸಂಚರಿಸುತ್ತಿರುವ ಪ್ರಯಾಣಿಕರ ಸಂಖ್ಯೆ ಇಳಿಮುಖಗೊಂಡು, ಪ್ರತಿದಿನ ಸಾರಿಗೆ ಆದಾಯದಲ್ಲಿ ಅಂದಾಜು ರೂ.50.00 ಲಕ್ಷ ಕೊರತೆಯುಂಟಾಗಿರುತ್ತದೆ. |
| ಆ | ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ಬಸ್ಸುಗಳಲ್ಲಿ ಪ್ರಯಾಣ ಮಾಡುವಂತೆ ಪ್ರೋತ್ಸಾಹಿಸಲು ಸಂಸ್ಥೆ ಏನಾದರೂ ಆಕರ್ಷಕವಾದ ಕಾರ್ಯಕ್ರಮ ಹಮ್ಮಿಕೊಂಡಿದೆಯೇ; (ವಿವರ ಒದಗಿಸುವುದು). | **ಪ್ರಯಾಣಿಕರನ್ನು ಆಕರ್ಷಿಸಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ :**<br>➢ ಸಾರ್ವಜನಿಕರನ್ನು ಸಮೂಹ ಸಾರಿಗೆಯತ್ತ ಸೆಳೆಯುವ ದೃಷ್ಟಿಯಿಂದ ಸಂಸ್ಥೆಯು ವಿವಿಧ ರೀತಿಯ ರಿಯಾಯಿತಿ ಪಾಸುಗಳನ್ನು ವಿತರಣೆ ಮಾಡುತ್ತಿದೆ.<br>➢ ಅಲ್ಲದೇ, ಸಂಸ್ಥೆಯು ಕಾರ್ಮಿಕ ಇಲಾಖೆಯ ಸಹಯೋಗದೊಂದಿಗೆ ಬೆಂಗಳೂರು ನಗರದ ಕಟ್ಟಡ ಮತ್ತು ನಿರ್ಮಾಣ ಕಾರ್ಮಿಕರಿಗೆ 'ಸಹಾಯ ಹಸ್ತ' ಪಾಸನ್ನು ವಿತರಣೆ ಮಾಡುತ್ತಿದೆ.<br>➢ ಮಹಿಳಾ ಗಾರ್ಮೆಂಟ್ಸ್ ನೌಕರರಿಗೆ ಹೆಚ್ಚಿನ ರಿಯಾಯಿತಿ ದರದಲ್ಲಿ ಮಾಸಿಕ ಪಾಸುಗಳನ್ನು ವಿತರಣೆ ಮಾಡುವ ಸಂಬಂಧ ಪಾಸಿನ ವೆಚ್ಚವನ್ನು ಭರಿಸುವ ಕುರಿತು ಕಾರ್ಮಿಕ ಇಲಾಖೆಯನ್ನು ಕೋರಲಾಗಿದೆ.<br>➢ ಬಿಬಿಎಂಪಿ, ಬಿಟಿಪಿ, ನಗರ ಭೂ ಸಾರಿಗೆ ನಿರ್ದೇಶನಾಲಯ ರವರುಗಳ ಸಹಯೋಗದೊಂದಿಗೆ ಸೆಂಟ್ರಲ್ ಸಿಲ್ಕ್ ಬೋರ್ಡ್‌ನಿಂದ ಟಿನ್ ಫ್ಯಾಕ್ಟರಿಯವರೆಗೆ 'ಬಸ್ ಆದ್ಯತಾ ಪಥವನ್ನು' ಯಶಸ್ವಿಯಾಗಿ ಅನುಷ್ಠಾನಗೊಳಿಸಲಾಗಿದೆ. ಇದರಿಂದ ನಗರದ ಸಂಚಾರ ದಟ್ಟಣೆಯು ಕಡಿಮೆಯಾಗಿ, ಸಾರ್ವಜನಿಕರನ್ನು ಸಮೂಹ ಸಾರಿಗೆಯನ್ನು ಬಳಸಲು ಉತ್ತೇಜಿಸಲಾಗುತ್ತಿದೆ.<br>➢ ಮೆಟ್ರೋ ರೈಲು ಪ್ರಯಾಣಿಕರಿಗೆ ಮೆಟ್ರೋ ರೈಲು ನಿಲ್ದಾಣದಿಂದ ವಾಸಸ್ಥಳಗಳಿಗೆ ತಲುಪಲು (first and last mile connectivity) ಮೆಟ್ರೋ ಫೀಡರ್ ಸೇವೆಗಳನ್ನು ಒದಗಿಸಲಾಗುತ್ತಿದೆ. |

...2

| | | |
|---|---|---|
| | | ➢ ಪ್ರಯಾಣಿಕರು ಹಾಗೂ ನಿರ್ವಾಹಕರ ನಡುವೆ ನಗದು ವ್ಯವಹಾರವನ್ನು ಕಡಿಮೆಗೊಳಿಸುವ ಹಾಗೂ ಚಿಲ್ಲರೆ ಸಮಸ್ಯೆ ನಿವಾರಿಸುವ ನಿಟ್ಟಿನಲ್ಲಿ ಪ್ರಯಾಣ ದರ ರೂ.5/-ರ ಗುಣಕದಲ್ಲಿ ನಿಗದಿಪಡಿಸಿ ಪುನರ್‌ರಚಿತ ಪ್ರಯಾಣದರಗಳನ್ನು ಆಕರಿಸಲಾಗುತ್ತಿದೆ.<br>➢ ನಗದು ವ್ಯವಹಾರವನ್ನು ಕಡಿಮೆಗೊಳಿಸಲು ಮತ್ತು ಸುಲಭವಾಗಿ ಹಣ ಸಂದಾಯಗೊಳಿಸಲು ಡಿಜಿಟಲ್ ಟಿಕೇಟಿಂಗ್ (QR code based) ವ್ಯವಸ್ಥೆಯನ್ನು ಅಳವಡಿಸಿಕೊಳ್ಳಲಾಗಿರುತ್ತದೆ.<br>➢ ಮಾಸಿಕ ಮತ್ತು ದಿನದ ಪಾಸುಗಳ ಜೊತೆಗೆ ವಾರದ ಪಾಸುಗಳನ್ನು ಪರಿಚಯಿಸಲಾಗಿರುತ್ತದೆ.<br>➢ ಮುಂದುವರೆದು, ನಗರದ ಸಂಚಾರ ದಟ್ಟಣೆಯನ್ನು ಕಡಿಮೆಗೊಳಿಸುವ ಹಿನ್ನೆಲೆಯಲ್ಲಿ ಹೆಚ್ಚಿನ ಸಂಚಾರ ದಟ್ಟಣೆಯ 12 ಕಾರಿಡಾರ್‌ಗಳಲ್ಲಿ ಬಸ್ ಆದ್ಯತಾ ಪಥವನ್ನು 2ನೇ ಹಂತದಲ್ಲಿ ಅನುಷ್ಠಾನಗೊಳಿಸಲು ಯೋಜಿಸಲಾಗಿದೆ.<br>➢ ಸಂಸ್ಥೆಯು ಸಾಂದರ್ಭಿಕ ಒಪ್ಪಂದ, ಖಾಯಂ ಗುತ್ತಿಗೆ ಹಾಗೂ ಡೆಡಿಕೇಟೆಡ್ ಸೇವೆಗಳನ್ನು ಒದಗಿಸುತ್ತಿದೆ.<br>➢ ಭಾರತ ಸರ್ಕಾರದ ಫೇಮ್-2 ಅಡಿಯಲ್ಲಿ 300 ಹವಾನಿಯಂತ್ರಿತ ಬಸ್ಸುಗಳು, ರಾಜ್ಯ ಸರ್ಕಾರದ ಯೋಜನೆಯಡಿಯಲ್ಲಿ ಹಾಗೂ ಸ್ಮಾರ್ಟ್ ಸಿಟಿ ಯೋಜನೆಯಡಿಯಲ್ಲಿ 90 ಮೆಟ್ರೋ ಫೀಡರ್ ಬಸ್ಸುಗಳು ಒಟ್ಟಾರೆ 390 ಬಸ್ಸುಗಳನ್ನು ಸಂಸ್ಥೆಯ ವಾಹನ ಬಲಕ್ಕೆ ಸೇರ್ಪಡೆಗೊಳಿಸಲು ಯೋಜಿಸಲಾಗಿದೆ.<br>➢ ಸಂಸ್ಥೆಯ ವಾಹನಗಳಲ್ಲಿ ಕರ್ತವ್ಯ ನಿರ್ವಹಿಸುವ ಚಾಲಕರು, ನಿರ್ವಾಹಕರಿಗೆ ಹಾಗೂ ಪ್ರಯಾಣಿಕರಿಗೆ ಸಾಂಕ್ರಾಮಿಕ ರೋಗ ಹರಡದಂತೆ ಹಾಗೂ ಪ್ರಯಾಣಿಕರ ಸುರಕ್ಷತೆಯ ನಿಟ್ಟಿನಲ್ಲಿ ಬಸ್ಸುಗಳಲ್ಲಿ ಶುಚಿತ್ವವನ್ನು ಕಾಪಾಡಲು, ಸೋಂಕು ನಿವಾರಣಾ ಔಷಧಿಗಳನ್ನು ಸಿಂಪಡಿಸಿ ಶುಚಿಗೊಳಿಸಲಾಗುತ್ತಿದೆ.<br>➢ ಚಾಲನಾ ಸಿಬ್ಬಂದಿಗಳಿಂದ ಕೋವಿಡ್-19 ಸಾಂಕ್ರಾಮಿಕ ರೋಗ ಹರಡದಂತೆ ತಡೆಗಟ್ಟಲು ಅವಶ್ಯವಿರುವ ಮುಖಗವಸು ಮತ್ತು ಸ್ಯಾನಿಟೈಸರ್‌ಗಳನ್ನು ಸರಬರಾಜುಗೊಳಿಸಲಾಗಿದ್ದು, ಕರ್ತವ್ಯದ ಅವಧಿಯಲ್ಲಿ ಸಿಬ್ಬಂದಿಗಳು ಕಡ್ಡಾಯವಾಗಿ ಮುಖಗವಸನ್ನು ಧರಿಸುವಂತೆ ಹಾಗೂ ಸ್ಯಾನಿಟೈಸರ್‌ನ್ನು ಆಗಿಂದಾಗ್ಗೆ ಬಳಸಿ ಕೈಗಳ ಶುಚಿತ್ವವನ್ನು ಕಾಪಾಡಿಕೊಳ್ಳುವಂತೆ ತಿಳಿಸಲಾಗಿರುತ್ತದೆ.<br>➢ ಸಾರ್ವಜನಿಕ ಪ್ರಯಾಣಿಕರೊಂದಿಗೆ ಅಂತರ ಕಾಪಾಡಿಕೊಳ್ಳಲು, ಚಾಲಕರಿಗೆ ಪ್ರತ್ಯೇಕ ಕ್ಯಾಬಿನ್ ವ್ಯವಸ್ಥೆಯನ್ನು ಮಾಡಲಾಗಿರುತ್ತದೆ. |
| ಇ. | ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ಬಸ್ಸುಗಳಲ್ಲಿ ಹಿರಿಯ ನಾಗರೀಕರಿಗೆ, ಮಕ್ಕಳಿಗೆ, ಮಹಿಳೆಯರಿಗೆ ರಿಯಾಯಿತಿ ಪಾಸುಗಳನ್ನು ನೀಡುವುದು, ಹಿಂದೆ ಮಾಡುತ್ತಿದ್ದಂತೆ ಬಸ್ ಟಿಕೇಟ್ ನಂಬರುಗಳಿಗೆ ಲಾಟರಿ ಎತ್ತಿ ಬಹುಮಾನಗಳನ್ನು ನೀಡುವಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಸಾರ್ವಜನಿಕರನ್ನು ಆಕರ್ಷಿಸಲಾಗುವುದೇ ; ಈ ಬಗ್ಗೆ ಸಂಸ್ಥೆಯ ನಿಲುವೇನು? | ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು ಸಾಮಾಜಿಕ ಹೊಣೆಗಾರಿಕೆಯಡಿಯಲ್ಲಿ ಹಿರಿಯ ನಾಗರಿಕರಿಗೆ ಸಾಮಾನ್ಯ ಮತ್ತು ವಜ್ರ ಸೇವೆಗಳ ಟಿಕೇಟ್ ದರದಲ್ಲಿ ಶೇ.25ರಷ್ಟು ರಿಯಾಯಿತಿಯನ್ನು ಹಾಗೂ ಸಾಮಾನ್ಯ ಮಾಸಿಕ ಪಾಸಿನ ದರದಲ್ಲಿ ಶೇ.10 ರಷ್ಟು ರಿಯಾಯಿತಿಯನ್ನು ಕಲ್ಪಿಸಿರುತ್ತದೆ. |

...3

ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳಿಗೆ ಮತ್ತು ಎಲ್ಲಾ ತರಗತಿಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಉಚಿತ ಪಾಸುಗಳನ್ನು ಹಾಗೂ ಉಳಿದ ವಿದ್ಯಾರ್ಥಿಗಳಿಗೆ ರಿಯಾಯಿತಿ ಬಸ್ ಪಾಸುಗಳನ್ನು ವಿತರಣೆ ಮಾಡುತ್ತಿದೆ

ಸಂಸ್ಥೆಯು ಗಾರ್ಮೆಂಟ್ಸ್ ಕಾರ್ಖಾನೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಮಹಿಳೆಯರ ಅನುಕೂಲಕ್ಕಾಗಿ ರಿಯಾಯಿತಿ ದರದ **"ವನಿತಾ ಸಂಗಾತಿ"** ಪಾಸನ್ನು ವಿತರಣೆ ಮಾಡಲು ಯೋಜಿಸಿದ್ದು, ಪಾಸಿನ ವೆಚ್ಚವನ್ನು ಭರಿಸುವ ಕುರಿತು ಕಾರ್ಮಿಕ ಇಲಾಖೆಯನ್ನು ಕೋರಲಾಗಿದೆ.

ಸಂಸ್ಥೆಯು ಸಾರ್ವಜನಿಕ ಪ್ರಯಾಣಿಕರನ್ನು ಸಾರಿಗೆ ಸೇವೆಗಳತ್ತ ಆಕರ್ಷಿಸಲು ಸಂಸ್ಥೆಯ ಪಾಸುದಾರರಿಗೆ ದಿನಾಂಕ: 01.06.2003 ರಿಂದ ಜಾರಿಗೆ ಬರುವಂತೆ ಕಾಮನಬಿಲ್ಲು ಯೋಜನೆಯನ್ನು ಜಾರಿಗೆ ತಂದಿತ್ತು. ಈ ಯೋಜನೆಯಲ್ಲಿ ವಿಮಾ ಸೌಲಭ್ಯದೊಂದಿಗೆ ಲಾಟರಿ ಮೂಲಕ ಬಹುಮಾನಗಳನ್ನು ನೀಡಲಾಗುತ್ತಿತ್ತು. ಆದರೆ ಲಾಟರಿ ಬಹುಮಾನಗಳನ್ನು ಪಡೆಯಲು ಪಾಸುದಾರರು ಆಸಕ್ತಿವಹಿಸದೇ, ಹೆಚ್ಚಿನ ಜನಮನ್ನಣೆ ಗಳಿಸದೇ ಇದ್ದುದರಿಂದ ದಿನಾಂಕ:01.06.2011 ರಿಂದ ಜಾರಿಗೆ ಬರುವಂತೆ ಕಾಮನಬಿಲ್ಲು ಯೋಜನೆಯನ್ನು ಸ್ಥಗಿತಗೊಳಿಸಿ, ದ್ವಿ-ಪ್ರಯೋಜನಾ ಯೋಜನೆಯನ್ನು ಜಾರಿಗೆ ತರಲಾಯಿತು.

ಪ್ರಸ್ತುತ ಸಂಸ್ಥೆಯು ಸಾರ್ವಜನಿಕ ಪ್ರಯಾಣಿಕರನ್ನು ಸಾರಿಗೆ ಸೇವೆಗಳತ್ತ ಆಕರ್ಷಿಸುವ ಸಲುವಾಗಿ ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ.

- ಸಂಸ್ಥೆಯ ಪಾಸುದಾರರು ಸಾರಿಗೆಗಳಲ್ಲಿ ಸೇವೆಗಳಿಗನುಗುಣವಾಗಿ ಅನಿಯಮಿತವಾಗಿ ಪ್ರಯಾಣಿಸಲು ಅವಕಾಶ ಕಲ್ಪಿಸಲಾಗಿದೆ.

**ದ್ವಿ ಪ್ರಯೋಜನಾ ಸೌಲಭ್ಯವನ್ನು ಈ ಕೆಳಕಂಡಂತೆ ಕಲ್ಪಿಸಿದೆ.**

**ಸಾಮಾನ್ಯ ಮಾಸಿಕ ಪಾಸುದಾರರು:**

- ಸದರಿ ಪಾಸನ್ನು ಹೊಂದಿದ ಪಾಸುದಾರರು ಮಾನ್ಯತಾ ಅವಧಿಯಲ್ಲಿ ವಾಹನ ಅಪಘಾತದಲ್ಲಿ ಮೃತರಾದಲ್ಲಿ ಅಥವಾ ಸಂಪೂರ್ಣ ಅಂಗವಿಕಲರಾದಲ್ಲಿ ರೂ.2.00 ಲಕ್ಷ ವಿಮಾ ಸೌಲಭ್ಯ ಕಲ್ಪಿಸಿದೆ.
- ಸದರಿ ಪಾಸನ್ನು ಹೊಂದಿದ ಪಾಸುದಾರರು ಮಾನ್ಯತಾ ಅವಧಿಯಲ್ಲಿ ವಾಹನ ಅಪಘಾತದಲ್ಲಿ ಒಳರೋಗಿಯಾಗಿ ಚಿಕಿತ್ಸೆ ಪಡೆದಲ್ಲಿ ರೂ.30,000/- ಗಳವರೆಗೆ ವೈದ್ಯಕೀಯ ವೆಚ್ಚದ ಮರುಪಾವತಿ ಸೌಲಭ್ಯ ಕಲ್ಪಿಸಿದೆ.

| | | |
|---|---|---|
| | | **ವಜ್ರ ಮಾಸಿಕ ಪಾಸುದಾರರು:**<br>➢ ಸದರಿ ಪಾಸನ್ನು ಹೊಂದಿದ ಪಾಸುದಾರರು ಮಾನ್ಯತಾ ಅವಧಿಯಲ್ಲಿ ವಾಹನ ಅಪಘಾತದಲ್ಲಿ ಮೃತರಾದಲ್ಲಿ ಅಥವಾ ಸಂಪೂರ್ಣ ಅಂಗವಿಕಲರಾದಲ್ಲಿ ರೂ.5.00 ಲಕ್ಷ ವಿಮಾ ಸೌಲಭ್ಯ ಕಲ್ಪಿಸಿದೆ.<br>➢ ಸದರಿ ಪಾಸನ್ನು ಹೊಂದಿದ ಪಾಸುದಾರರು ಮಾನ್ಯತಾ ಅವಧಿಯಲ್ಲಿ ವಾಹನ ಅಪಘಾತದಲ್ಲಿ ಒಳರೋಗಿಯಾಗಿ ಚಿಕಿತ್ಸೆ ಪಡೆದಲ್ಲಿ ರೂ.50,000/- ಗಳವರೆಗೆ ವೈದ್ಯಕೀಯ ವೆಚ್ಚದ ಮರುಪಾವತಿ ಸೌಲಭ್ಯ ಕಲ್ಪಿಸಿದೆ.<br>**ವಾಯುವಜ್ರ ಮಾಸಿಕ ಪಾಸುದಾರರು:**<br>➢ ಸದರಿ ಪಾಸನ್ನು ಹೊಂದಿದ ಪಾಸುದಾರರು ಮಾನ್ಯತಾ ಅವಧಿಯಲ್ಲಿ ವಾಹನ ಅಪಘಾತದಲ್ಲಿ ಮೃತರಾದಲ್ಲಿ ಅಥವಾ ಸಂಪೂರ್ಣ ಅಂಗವಿಕಲರಾದಲ್ಲಿ ರೂ.10.00 ಲಕ್ಷ ವಿಮಾ ಸೌಲಭ್ಯ ಕಲ್ಪಿಸಿದೆ.<br>➢ ಸದರಿ ಪಾಸನ್ನು ಹೊಂದಿದ ಪಾಸುದಾರರು ಮಾನ್ಯತಾ ಅವಧಿಯಲ್ಲಿ ವಾಹನ ಅಪಘಾತದಲ್ಲಿ ಒಳರೋಗಿಯಾಗಿ ಚಿಕಿತ್ಸೆ ಪಡೆದಲ್ಲಿ ರೂ.50,000/- ಗಳವರೆಗೆ ವೈದ್ಯಕೀಯ ವೆಚ್ಚದ ಮರುಪಾವತಿ ಸೌಲಭ್ಯ ಕಲ್ಪಿಸಿದೆ. |

ಸಂಖ್ಯೆ: ಟಿಡಿ 261 ಟಿಸಿಕ್ಯೂ 2020

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು